ಶೌಚಾಲಯ ಹಾಗೂ ಶಾಲೆ ಮತ್ತು ಅಂಗನವಾಡಿಗಳಿಗೆ ಶೌಚಾಲಯಗಳನ್ನು ನಿರ್ಮಿಸಲು ಸ್ವಚ್ಛಗ್ರಾಮ, ನಿರ್ಮಲ ಗ್ರಾಮ ಹಾಗೂ ಸಂಪೂರ್ಣ ನೈರ್ಮಲ್ಯ ಆಂದೋಲನ ಯೋಜನೆಗಳಡಿ ಕ್ರಮ ಕೈಗೊಳ್ಳಲಾಗಿದೆ.

ಆ) ಕೂಡ್ಲಿಗಿ ವಿಧಾನ ಸಭಾಕ್ಷೇತ್ರದಲ್ಲಿ ಬರುವ 79 ಗ್ರಾಮಗಳಲ್ಲಿನ 36517 ಕುಟುಂಬಗಳ ಪೈಕಿ ಈಗಾಗಲೇ 4398 ಕುಟುಂಬಗಳಿಗೆ ವೈಯಕ್ತಿಕ ಶೌಚಾಲಯಗಳನ್ನು ಒದಗಿಸಲಾಗಿದೆ. ಉಳಿದ 32119 ಕುಟುಂಬಗಳಿಗೆ ಶೌಚಾಲಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಸಂಪೂರ್ಣ ನೈರ್ಮಲ್ಯ ಆಂದೋಲನದಡಿಯಲ್ಲಿ ಬಾಕಿ ಉಳಿದ 32119 ಕುಟುಂಬಗಳಿಗೆ ಮುಂಬರುವ ದಿನಗಳಲ್ಲಿ ವೈಯಕ್ತಿಕ ಶೌಚಾಲಯಗಳನ್ನು ಪ್ರತಿ ಕುಟುಂಬದಿಂದ ಸರ್ಕಾರ ನಿಗದಿಪಡಿಸಿದ ವಂತಿಗೆಯನ್ನು ಸಂಗ್ರಹಿಸುವ ಮುಖಾಂತರ ಶೌಚಾಲಯಗಳನ್ನು ಒದಗಿಸಲು ಯೋಜಿಸಲಾಗಿದೆ.

2449(3270) ಶ್ರೀ ಅನಿಲ್ ಹೆಚ್. ಲಾಡ್ (ಕೂಡ್ಲಿಗಿ):- ಬಿ. ದಯವಿಟ್ಟು ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸುವರೇ.

ಅ) ಬಳ್ಳಾರಿ ಜಿಲ್ಲೆ ಹೊಸಪೇಟೆ ತಾಲ್ಲೂಕಿನ ಮರಿಯಮ್ಮನಹಳ್ಳಿ ಮತ್ತು ಸುತ್ತಲಿನ 7 ಗ್ರಾಮಗಳಿಗೆ ಕುಡಿಯುವ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸಮುದಾಯ ಆಧಾರಿತ ಕುಡಿಯುವ ನೀರಿನ ಯೋಜನೆಯಡಿ ಶುದ್ಧ ನೀರು ಒದಗಿಸಲು ಸರ್ಕಾರ ನಿರ್ಧರಿಸಿದೆಯೇ;

ಇ) ಹಾಗಿದ್ದರೆ, ಈವರೆಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ;

ಶ್ರೀ ಬಿ. ಸತ್ಯನಾರಾಯಣ (ಗ್ರಾಮೀಣ ನೀರು ಸರಬರಾಜು, ನೈರ್ಮಲ್ಯ ಮತ್ತು ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ರಾಜ್ಯ ಸಚಿವರು)

ಅ) ಹೌದು,

ಆ) ಸಮುದಾಯ ಆಧಾರಿತ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಸದರಿ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

ಇ) ಸಮುದಾಯ ಆಧಾರಿತ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಸದರಿ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ರೂ. 299.25 ಲಕ್ಷಗಳ ಮೊತ್ತದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಯೋಜನಾ ಮೊತ್ತದ ಶೇ. 10 ರಷ್ಟನ್ನು ಸದರಿ ಗ್ರಾಮಗಳ ಜನ ಸಮುದಾಯವು ತಮ್ಮ ಪಾಲಿನ ವಂತಿಗೆಯನ್ನು ನೀಡಲು ಮುಂದೆ ಬಂದಿರುತ್ತಾರೆ. ಈಗಾಗಲೇ ಸದರಿ ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು ಒಟ್ಟು ರೂ. 50.00 ಲಕ್ಷಗಳನ್ನು ಗ್ರಾಮ ನೀರು ನೈರ್ಮಲ್ಯ ಸಮಿತಿ ಮರಿಯಮ್ಮನಹಳ್ಳಿ ಇವರಿಗೆ ಬಿಡುಗಡೆ ಮಾಡಲಾಗಿದೆ. ಒಟ್ಟು ರೂ. 75.00 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.